"2009ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2009ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ".

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ –10)

ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕ, 2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2009ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ–ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು : ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2009ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು